ಸುದ್ದಿ ಬಿಡುಗಡೆ

# ಡಿ.ಸಿ.ಆರ್. ನಲ್ಲಿ ಸಂಸ್ಥಾಪನಾ ದಿನಾಚರಣೆ - ಎಸ್.ಸಿ.ಎಸ್.ಪಿ ರೈತರ ಸಭೆ




ಪುತ್ತೂರು: ಮೊಟ್ಟೆತ್ತಡ್ಕದಲ್ಲಿರುವ ಗೇರು ಸಂಶೋಧನಾ ನಿರ್ದೇಶನಾಲಯದಲ್ಲಿ ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ ಹಾಗೂ ಎಸ್.ಸಿ.ಎಸ್.ಪಿ. ರೈತರ ಸಭೆಯು ಜೂ.18 ರಂದು ನಡೆಯಿತು. ಸುಳ್ಯ ತಾಲೂಕು ಪಂಚಾಯತ್ ಅಧ್ಯಕ್ಷ ಚನಿಯ ಕಲ್ತಡ್ಕ ಮಾತನಾಡಿ, ವಿತರಿಸಿದ ಯಂತ್ರಗಳು ರೈತರ ಜೀವನಕ್ಕೆ ಉಪಯುಕ್ತವಾಗಲೆಂದು ಹಾರೈಸಿದರು, ಪುತ್ತೂರು ತಾಲೂಕು ಪಂಚಾಯತ್ ಅಧ್ಯಕ್ಷ ರಾಧಾಕೃಷ್ಣ ಬೋರ್ಕರ್ ಮಾತನಾಡಿ ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು. ತಮಗೆ ನೀಡಿದ ಸವಲತ್ತುಗಳ ಮಾಹಿತಿಯನ್ನು ಇನ್ನೊಬ್ಬರಿಗೂ ಹಂಚಿಕೊಳ್ಳಬೇಕು ಎಂದರು. ಪರಿಶಿಷ್ಟ ಜಾತಿಯವರು ತಮಗೆ ಕೊಡಮಾಡಿದ ಕೃಷಿಯಂತ್ರಗಳ ಸದ್ಬಳಕೆ ಮಾಡಿಕೊಂಡು ಸಮಾಜದಲ್ಲಿ ಗೌರವಾನ್ವಿತ ಜೀವನ ನಡೆಸುವಂತಾಗಲಿ ಎಂದು ಹಾರೈಸಿದರು, ತಾಲೂಕು ಪಂಚಾಯತ್ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷ ಸಾಜ ರಾಧಾಕೃಷ್ಣ ಆಳ್ವ ಮಾತನಾಡಿ, ಡಿ.ಸಿ.ಆರ್.ನಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದವರಿಗಾಗಿ ಇನ್ನೂ ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲೆಂದು ಹಾರೈಸಿದರು. ಎ.ಪಿ.ಎಂ.ಸಿ ಮಾಜಿ ಅಧ್ಯಕ್ಷ ಬೂಡಿಯಾರು ರಾಧಾಕೃಷ್ಣ ರೈಯವರು ಗೇರು ಕೃಷಿಯಲ್ಲಿ ತಮ್ಮ ಅನುಭವವನ್ನು ಹಂಚಿಕೊಂಡರು.

ಸಂಸ್ಥೆಯ ಪ್ರಭಾರ ನಿರ್ದೇಶಕರಾದ ಡಾ. ಎಂ.ಜಿ. ನಾಯಕ್ ಸ್ವಾಗತಿಸಿ ಸಂಸ್ಥೆಯ ಹುಟ್ಟು ಹಾಗೂ ಬೆಳೆದು ಬಂದ ರೀತಿಯ ಬಗ್ಗೆ ಮಾಹಿತಿ ನೀಡಿದರು. ಸಂಸ್ಥೆಯ ಬೆಳವಣಿಗೆಗಾಗಿ ದುಡಿದ ಎಲ್ಲಾ ಮಹನೀಯರನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು. ಎಸ್.ಸಿ.ಎಸ್.ಪಿ. ಯೋಜನೆಯಡಿ ಮೋಟಾರ್ ಚಾಲಿತ ಗರಗಸ, ಕಳೆತೆಗೆಯುವ ಯಂತ್ರ, ತೊಲಿಗೆ ಯಂತ್ರ ಹಾಗೂ ಇತರ ವಸ್ತುಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸಿದರು.